ಆ) ಹಾಗಿದ್ದಲ್ಲಿ, ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು?

ಶ್ರೀ ಜಿ.ಜನಾರ್ಧನ ರೆಡ್ಡಿ : (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಕೂಡ್ಲು ಜಲಪಾತವಿರುವ ಪ್ರದೇಶವು ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬರುತ್ತದೆ. ಈ ಪ್ರದೇಶವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಸಂಬಂಧ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಭಿವೃದ್ಧಿಪಡಿಸಲು ಸಾಧ್ಯವಿದ್ದಲ್ಲಿ ಪ್ರಸ್ತಾವನೆ ಸಲ್ಲಿಸಲು ಪ್ರವಾಸೋದ್ಯಮ ಇಲಾಖೆಯ ವಿಶೇಷಾಧಿಕಾರಿಗಳಿಗೆ ಸೂಚಿಸಲಾಗಿದೆ.

Koodluteertha is under the control of Forest Department. To develop this place as a tourist centre, the Special Officer of the Department of Tourism has been asked to discuss with the concerned Forest Department officers and submit a report in this regard.

ಆ) ವರದಿ ಬಂದ ನಂತರ ಅಗತ್ಯವಿದ್ದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

After getting the report if necessary action will be taken in this regard.

1104 ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ಜಾರಿಗೊಳಿಸಿದ ಸುವರ್ಣ ರಸ್ತೆ ಯೋಜನೆಯ ವಿವರಗಳೇನು?

ಆ) ಈ ಯೋಜನಾ ಸೌಲಭ್ಯವನ್ನು ಬೆಂಗಳೂರು ಮಹಾನಗರ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳಿಗೆ ಅನ್ವಯಿಸುವುದಿಲ್ಲವೆ.

ಇ) ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ಇಲಾಖೆಯ ಸೌಲಭ್ಯಗಳ ಕೊಡುಗೆಗಳೇನು?

ಈ) ಸುವರ್ಣ ರಸ್ತೆ ಯೋಜನೆಯನ್ನು ಯೋಜಿತ ಅವಧಿಯಲ್ಲಿಯೇ ಜಾರಿಗೊಳಿಸಲು ಸರ್ಕಾರದ ಕ್ರಮಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2009-10ನೇ ಸಾಲಿನ ಆಯವ್ಯದಲ್ಲಿ ಲೆ.ಶೀ.5054-04-800-1-09-172(ಯೋಜನೆ)- ರೂ.10,000.00 ಲಕ್ಷಗಳನ್ನು ಒದಗಿಸಲಾಗಿದೆ. ಈ

ಅನುದಾನದಲ್ಲಿ ನಗರ ವಿಧಾನ ಸಭಾ ಕ್ಷೇತ್ರಗಳನ್ನು ಹೊರತುಪಡಿಸಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.52.08ಲಕ್ಷಗಳಂತೆ ಅನುದಾನ ಒದಗಿಸಲಾಗಿದೆ. ಈ ಅನುದಾನಕ್ಕೆ ತಕ್ಕಂತೆ ರೂ.104.16 ಲಕ್ಷಗಳ ಅಂದಾಜು ಮೊತ್ತದ ಕಾಮಗಾರಿಯನ್ನು 1:2 ಅನುಪಾತಕ್ಕೆ ಸೀಮಿತಗೊಳಿಸಿ ಮಂಜೂರಾತಿ ನೀಡಲಾಗಿದೆ. ರಾಜ್ಯದಲ್ಲಿನ ಎಲ್ಲಾ ವಿಭಾಗಗಳಲ್ಲಿ ರೂ.19998.72ಲಕ್ಷಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದೆ.

ಆ) ಬೆಂಗಳೂರು ಮಹಾನಗರ ವ್ಯಾಪ್ತಿಯಡಿ ಬರುವ ವಿಧಾನಸಭಾ ಕ್ಷೇತ್ರದಲ್ಲಿನ ರಸ್ತೆಗಳ ಅಭಿವೃದ್ಧಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಮೆಟ್ರೊ ಯೋಜನೆಗಳಡಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಪ್ರತ್ಯೇಕವಾಗಿ ಕೈಗೆತ್ತಿಕೊಳ್ಳಲಾಗುತ್ತದೆ. ಈ ಯೋಜನೆಯ ಸೌಲಭ್ಯ ಬೆಂಗಳೂರು ಮಹಾನಗರ ವ್ಯಾಪ್ತಿಯಡಿ ಬರವ ವಿಧಾನಸಭಾ ಕ್ಷೇತ್ರಗಳಿಗೆ ಅನ್ವಯಿಸುವುದಿಲ್ಲ.

ಇ) ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಮೆಟ್ರೊ ಯೋಜನೆಗಳಡಿ ಆಯವ್ಯಯದಲ್ಲಿ ಪ್ರತ್ಯೇಕವಾಗಿ ಅನುದಾನ ಒದಗಿಸಲಾಗಿದೆ.

ಲೋಕೋಪಯೋಗಿ ಇಲಾಖಾವತಿಯಿಂದ ಕಲೆದ ಮೂರು ವರ್ಷಗಳಲ್ಲಿ ಬೆಂಗಳೂರು ಸುತ್ತಮುತ್ತಲಿನ ವಾಹನ ದಟ್ಟಣೆ ನಿಯಂತ್ರಣ ಗೊಳಿಸಲು 1011.36 ಕಿಮೀ ಉದ್ದದ 46 ರಸ್ತೆಗಳನ್ನು ರೂ.999.63ಲಕ್ಷಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸಲಾಗಿದೆ.

ಈ) ಕ್ರಿಯಾ ಯೋಜನೆಯು ಅನುಮೋದನೆಗೊಂಡಿರುತ್ತದೆ. ಅಂದಾಜುಗಳ ಮಂಜೂರಾತಿ ಹಂತದಲ್ಲಿದೆ. ಈಗಾಗಲೇ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದ್ದು, ಶೀಘ್ರದಲ್ಲಿ ಗುತ್ತಿಗೆದಾರರನ್ನು ನೇಮಿಸಿ ಯೋಜಿತ ಅವಧಿಯಲ್ಲಿಯೇ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1103 ಶ್ರೀ ಹ್ಯಾರೀಸ್ ಎನ್.ಎ. : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ವ್ಯಾಪ್ತಿಯ ಕರಾವಳಿ ಪ್ರದೇಶ ಸುರಕ್ಷತೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಆ) ಅನ್ಯರ ಅಕ್ರಮ, ಕಡಲು ಪ್ರದೇಶ, ಭಯೋತ್ಪಾದನೆ ಮತ್ತು ಭೂಗತ ಚಟುವಟಿಕೆಗಳು ಕರಾವಳಿ ವ್ಯಾಪ್ತಿಯಲ್ಲಿ ನಡೆಯದಂತೆ ನೋಡಿಕೊಳ್ಳಲು ಸರ್ಕಾರದ ಕಟ್ಟುನಿಟ್ಟಿನ ಕ್ರಮಗಳೇನು?